# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 678

ಮಾನ್ಯ ಸದಸ್ಯರ ಹೆಸರು : ಶ್ರೀ ಐವನ್ ಡಿ'ಸೋಜಾ

ಉತ್ತರಿಸಬೇಕಾದ ದಿನಾಂಕ : 22.07.2024

ಉತ್ತರಿಸಬೇಕಾದ ಸಚಿವರು : ಮಾನ್ಯ ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಕಸ್ತೂರಿ ರಂಗನ್ ವರದಿಯನ್ನು ಜಾರಿಗೊಳಿಸಲು ಕೇಂದ್ರ ಸರ್ಕಾರದ ನಿರ್ಧಾರದ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು) | ಪಶ್ಚಿಮ ಘಟ್ಟಗಳ ಸಂರಕ್ಷಣೆಯ ಕುರಿತು ಡಾ\| ಕೆ. ಕಸ್ತೂರಿ ರಂಗನ್ ನೇತೃತ್ವದ ಉನ್ನತ ಮಟ್ಟದ ಕಾರ್ಯನಿರತ ತಂಡ 2013 ರಲ್ಲಿ ವರದಿಯನ್ನು ಸಲ್ಲಿಸಿದ್ದು, ಸದರಿ ವರದಿಯಲ್ಲಿ ಭಾರತದ ಆರು ರಾಜ್ಯಗಳ ಅಂದಾಜು 56000 ಚದರ ಕಿ.ಮೀ. ಪ್ರದೇಶವನ್ನು ಪರಿಸರ ಸೂಕ್ಷ್ಮ ಪ್ರದೇಶ (Eco-Sensitive Area) ಗಳಾಗಿ ಶಿಫಾರಸ್ಸು ಮಾಡಲಾಗಿರುತ್ತದೆ. ಅದರಲ್ಲಿ ಕರ್ನಾಟಕದ 20,668 ಚದರ ಕಿಮೀ ಪ್ರದೇಶವನ್ನು ಒಳಗೊಂಡಿದ್ದು, ರಾಜ್ಯದ 10 ಜಿಲ್ಲೆಗಳಲ್ಲಿ 33 ತಾಲ್ಲೂಕುಗಳ 1533 ಗ್ರಾಮಗಳನ್ನು ಗುರುತಿಸಲಾಗಿದೆ. ಅವುಗಳು ಬೆಳಗಾವಿ, ಚಾಮರಾಜನಗರ, ಚಿಕ್ಕಮಗಳೂರು, ಕೊಡಗು, ಹಾಸನ, ಉತ್ತರ ಕನ್ನಡ, ದಕ್ಷಿಣ ಕನ್ನಡ, ಮೈಸೂರು, ಶಿವಮೊಗ್ಗ ಹಾಗೂ ಉಡುಪಿ ಜಿಲ್ಲೆಗಳು ಆಗಿವೆ.<br><br>ಸದರಿ ಸಮಿತಿಯ ವರದಿಯನ್ನಾಧರಿಸಿ, ಭಾರತ ಸರ್ಕಾರದ ಪರಿಸರ ಮತ್ತು ಅರಣ್ಯ ಮಂತ್ರಾಲಯವು ನಾಲ್ಕು ಕರಡು ಅಧಿಸೂಚನೆಗಳನ್ನು ಹೊರಡಿಸಿರುತ್ತದೆ. ಸದರಿ ಕರಡು ಅಧಿಸೂಚನೆಗಳನ್ವಯ ಗಣಿಗಾರಿಕೆ, ಕಲ್ಲುಗಣಿಗಾರಿಕೆ, ಮರಳು ಗಣಿಗಾರಿಕೆ, ಉಷ್ಣ ವಿದ್ಯುತ್ ಸ್ಥಾವರಗಳು, ಕಟ್ಟಡ ನಿರ್ಮಾಣಕ್ಕೆ ಮತ್ತು ಟೌನ್‌ಶಿಪ್ (ನಿರ್ದಿಷ್ಟ ಮಿತಿಗಳನ್ನು ಮೀರಿದ) ಅಭಿವೃದ್ಧಿಯನ್ನು ನಿಯಂತ್ರಿಸಲಾಗಿದೆ. ಭಾರತ ಸರ್ಕಾರವು ಸಕಾಲದಲ್ಲಿ ಅಧಿಸೂಚನೆಗಳನ್ನು ಅಂತಿಮಗೊಳಿಸಲು ಸಾಧ್ಯವಾಗದ ಕಾರಣ, ಮೊದಲ ನಾಲ್ಕು ಕರಡು ಅಧಿಸೂಚನೆಗಳ ಅವಧಿ ಮುಗಿದಿದ್ದು, ಪ್ರಸಕ್ತ ಭಾರತ ಸರ್ಕಾರವು ದಿನಾಂಕ: 6.7.2022 ರಂದು ಕರಡು ಅಧಿಸೂಚನೆಯನ್ನು ಹೊರಡಿಸಿದ್ದು, ಸದರಿ ಕರಡು ಅಧಿಸೂಚನೆಯ ಮಾನ್ಯತೆಯು ದಿನಾಂಕ:30.06.2024 ರಂದು ಮುಕ್ತಾಯಗೊಂಡಿರುತ್ತದೆ.<br><br>ಭಾರತ ಸರ್ಕಾರವು ಕರಡು ಅಧಿಸೂಚನೆಗಳ ಜೊತೆಗೆ |

ನಿರ್ದಿಷ್ಟ ಚಟುವಟಿಕೆಗಳ ಮೇಲೆ ನಿರ್ಬಂಧ ವಿಧಿಸಿ ದಿನಾಂಕ 13.11.2013ರಂದು ನಿರ್ದೇಶನವನ್ನು ಪರಿಸರ (ಸಂರಕ್ಷಣಾ) ಕಾಯ್ದೆ, ಸೆಕ್ಷನ್ 5 ರಡಿಯಲ್ಲಿ ಹೊರಡಿಸಿರುತ್ತದೆ. ಅದರಲ್ಲಿ ನಿರ್ದಿಷ್ಟ ಮಿತಿಗಳನ್ನು ಮೀರಿದ ಹಾಗೂ ಕೆಂಪು ವರ್ಗದ ಕೈಗಾರಿಕೆಗಳಡಿ ಬರುವ ಗಣಿಗಾರಿಕೆ, ಕಲ್ಲುಗಣಿಗಾರಿಕೆ, ಮರಳು ಗಣಿಗಾರಿಕೆ, ಉಷ್ಣ ವಿದ್ಯುತ್ ಸ್ಥಾವರಗಳು, ಕಟ್ಟಡ ನಿರ್ಮಾಣ ಮತ್ತು ಟೌನ್‌ಶಿಪ್ ಅಭಿವೃದ್ಧಿಯನ್ನು ವರದಿಯಲ್ಲಿ ಶಿಫಾರಸ್ಸು ಮಾಡಿದ ಪ್ರದೇಶಗಳಲ್ಲಿ ನಿಷೇಧಿಸಲು ನಿರ್ದೇಶನಗಳನ್ನು ನೀಡಿದೆ.

ಡಾ|| ಕೆ. ಕಸ್ತೂರಿರಂಗನ್ ಅಧ್ಯಕ್ಷತೆಯ ಸಮಿತಿಯ ಶಿಫಾರಸ್ಸುಗಳನ್ನು ಪರಿಗಣಿಸಿ ಕೇಂದ್ರ ಸರ್ಕಾರವು ಹೊರಡಿಸಿದ ಪಶ್ಚಿಮ ಘಟ್ಟ ಪದೇಶದಲ್ಲಿ ಪರಿಸರ ಸೂಕ್ಷ್ಮ ಪ್ರದೇಶಗಳೆಂದು ಘೋಷಿಸುವ ಕರಡು ಅಧಿಸೂಚನೆಯಲ್ಲಿರುವ ಅಂಶಗಳ ಬಗ್ಗೆ ಪರಾಮರ್ಶಿಸಲು ರಾಜ್ಯ ಸರ್ಕಾರವು ಡಿಸೆಂಬರ್ 2014 ರಲ್ಲಿ ಸಚಿವ ಸಂಪುಟ ಉಪ ಸಮಿತಿಯನ್ನು ರಚಿಸಿರುತ್ತದೆ. ಸದರಿ ಉಪ ಸಮಿತಿಯು ಪಶ್ಚಿಮ ಘಟ್ಟದ ಜಿಲ್ಲೆಗಳ ಸ್ಥಳೀಯ ಚುನಾಯಿತ ಪ್ರತಿನಿಧಿಗಳು (ಸಂಸದರು, ಶಾಸಕರು, ಎಂಎಲ್‌ಸಿಗಳು, ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯಿತಿ ಹಾಗೂ ಗ್ರಾಮ ಪಂಚಾಯಿತಿಗಳ ಅಧ್ಯಕ್ಷರು ಮತ್ತು ಸದಸ್ಯರು), ರೈತ ಪ್ರತಿನಿಧಿಗಳು, ಸಾರ್ವಜನಿಕರ ಅಭಿಪ್ರಾಯ ಪಡೆಯಲಾಗಿದ್ದು, ಅವರಿಂದ ವ್ಯಾಪಕವಾದ ವಿರೋಧ ವ್ಯಕ್ತವಾಗಿರುತ್ತದೆ.

ಮುಂದುವರೆದು, 2017 ರಲ್ಲಿ ಹೊರಡಿಸಲಾದ ಕರಡು ಅಧಿಸೂಚನೆಯ ಕುರಿತು ಎಲ್ಲ ಗ್ರಾಮ ಪಂಚಾಯಿತಿಗಳ ಕೇಂದ್ರ ಸ್ಥಾನಗಳಲ್ಲಿ ಸಭೆ ಕರೆದು ಸ್ಪಷ್ಟ ಗೊತ್ತುವಳಿಯನ್ನು ಸ್ವೀಕರಿಸಿ, ಸರ್ಕಾರಕ್ಕೆ ಸಲ್ಲಿಸುವಂತೆ ಸೂಚಿಸಲಾಗಿರುತ್ತದೆ. ಈ ಸಂಬಂಧ ಸ್ವೀಕೃತವಾಗಿರುವ ಎಲ್ಲ ಗೊತ್ತುವಳಿಗಳಲ್ಲಿ ಗ್ರಾಮ ಪಂಚಾಯಿತಿಗಳು ಹಾಗೂ ಸ್ಥಳೀಯ ಸಂಸ್ಥೆಗಳು ಡಾ| ಕೆ. ಕಸ್ತೂರಿ ರಂಗನ್ ವರದಿಯನ್ನು ತಿರಸ್ಕರಿಸಲು ನಿಲುವಳಿಗಳನ್ನು ಅಂಗೀಕರಿಸಿ ಕಳುಹಿಸಿರುತ್ತಾರೆ.

ಡಾ|| ಕೆ. ಕಸ್ತೂರಿರಂಗನ್ ಅಧ್ಯಕ್ಷತೆಯ ಸಮಿತಿಯು ಶಿಫಾರಸು ಮಾಡಿದ ರಾಜ್ಯದ ಸುಮಾರು 20,668 ಚ.ಕಿ.ಮೀ.ಗಳ ಒಟ್ಟು ವಿಸ್ತೀರ್ಣದಲ್ಲಿ ಈಗಾಗಲೇ 16,632 ಚ.ಕಿ.ಮೀ ಪ್ರದೇಶಗಳು ರಕ್ಷಿತ ಪ್ರದೇಶಗಳು, ಅಧಿಸೂಚಿತ ಅರಣ್ಯಗಳು

| | | |
|---|---|---|
| | | ಅಥವಾ ಪರಿಸರ ಸೂಕ್ಷ್ಮ ಪ್ರದೇಶಗಳೆಂದು ಘೋಷಿಸಲ್ಪಟ್ಟು ವಿವಿಧ ಕಾನೂನುಗಳ ರಕ್ಷಣೆಯ ಅಡಿಯಲ್ಲಿವೆ. ಈ ಪ್ರದೇಶಗಳ ಮೇಲೆ ಹೆಚ್ಚಿನ ನಿರ್ಬಂಧಗಳನ್ನು ವಿಧಿಸುವುದು ಸಂರಕ್ಷಣೆಯ ಉದ್ದೇಶಗಳಿಗೆ ಪ್ರತಿಕೂಲವಾಗುವುದಾಗಿ ರಾಜ್ಯ ಸರ್ಕಾರವು ಅಭಿಪ್ರಾಯಪಟ್ಟಿದೆ.<br><br>ಅಲ್ಲದೆ, ಈ ಪ್ರದೇಶಗಳನ್ನು ಹೊರತುಪಡಿಸಿ ಗ್ರಾಮ ವ್ಯಾಪ್ತಿಯಲ್ಲಿರುವ ಇನ್ನುಳಿದ ಕಂದಾಯ, ಕೃಷಿ, ಕಾಫಿ ತೋಟಗಳು, ಸಮುದಾಯ ಜಮೀನು ಪ್ರದೇಶಗಳ ಮೇಲೆ ಕೂಡಾ ನಿರ್ಬಂಧ ವಿಧಿಸುವುದು ಜನರ ಜೀವನೋಪಾಯಕ್ಕೆ ಪ್ರತಿಕೂಲ ಪರಿಣಾಮ ಉಂಟಾಗುವುದಾಗಿ ಸದರಿ ವರದಿಯ ಅನುಷ್ಠಾನಕ್ಕೆ ಸರ್ಕಾರವು ಆಕ್ಷೇಪಣೆಯನ್ನು ವ್ಯಕ್ತಪಡಿಸಿರುತ್ತದೆ.<br><br>ದಿನಾಂಕ: 09.12.2021 ರಂದು ಹಾಗೂ ದಿನಾಂಕ: 22.07.2022 ರಂದು ನಡೆದ ರಾಜ್ಯ ಸಚಿವ ಸಂಪುಟ ಸಭೆಗಳಲ್ಲಿ ಡಾ॥ ಕೆ. ಕಸ್ತೂರಿರಂಗನ್ ಅಧ್ಯಕ್ಷತೆಯ ಸಮಿತಿಯ ಶಿಫಾರಸ್ಸುಗಳನ್ನು ಪರಿಗಣಿಸಿ ಕೇಂದ್ರ ಸರ್ಕಾರವು ಹೊರಡಿಸಿದ ಪಶ್ಚಿಮ ಘಟ್ಟ ಪ್ರದೇಶದಲ್ಲಿ ಪರಿಸರ ಸೂಕ್ಷ್ಮ ಪ್ರದೇಶಗಳೆಂದು ಘೋಷಿಸುವ ಸಂಬಂಧ ಹೊರಡಿಸಿದ ಕರಡು ಅಧಿಸೂಚನೆಗಳನ್ನು ನಿರಾಕರಿಸಲು ನಿರ್ಣಯಿಸಲಾಗಿರುತ್ತದೆ. ಸದರಿ ನಿರ್ಣಯಗಳನ್ನು ಅನುಸರಿಸಿ ಕೇಂದ್ರ ಸರ್ಕಾರಕ್ಕೆ ದಿನಾಂಕ:18.12.2021 ಹಾಗೂ 02.08.2022 ರಂದು ಪತ್ರಗಳನ್ನು ಸಲ್ಲಿಸಲಾಗಿರುತ್ತದೆ.<br><br>ಅಲ್ಲದೆ, ದಿನಾಂಕ:25.07.2022 ರಂದು ಅಂದಿನ ಮಾನ್ಯ ಮುಖ್ಯಮಂತ್ರಿಗಳ ನೇತೃತ್ವದಲ್ಲಿ ನಿಯೋಗವು ನವ ದೆಹಲಿಯಲ್ಲಿ ಕೇಂದ್ರ ಸರ್ಕಾರದ ಮಾನ್ಯ ಅರಣ್ಯ ಪರಿಸರ ಮತ್ತು ಹವಾಮಾನ ಬದಲಾವಣೆ ಸಚಿವರನ್ನು ಬೇಟಿ ಮಾಡಿ ಸಚಿವ ಸಂಪುಟದಲ್ಲಿ ತೆಗೆದುಕೊಳ್ಳಲಾದ ನಿರ್ಣಯವನ್ನು ಮಾನ್ಯ ಸಚಿವರ ಗಮನಕ್ಕೆ ತಂದು ಕೇಂದ್ರ ಸರ್ಕಾರವು ದಿನಾಂಕ 06-07-2022 ರಂದು ಹೊರಡಿಸಿರುವ ಕರಡು ಅಧಿಸೂಚನೆಯನ್ನು ಹಿಂಪಡೆಯಲು ಮನವಿಯನ್ನು ಸಲ್ಲಿಸಿರುತ್ತಾರೆ.<br><br>ಏತನ್ಮಧ್ಯೆ, ಪಶ್ಚಿಮ ಘಟ್ಟ ಪ್ರದೇಶದಲ್ಲಿ ಪರಿಸರ ಸೂಕ್ಷ್ಮ ಪ್ರದೇಶಗಳ ಘೋಷಣೆಗೆ ಸಂಬಂಧಿಸಿದಂತೆ ಸಂಬಂಧಪಟ್ಟ |

| | | |
|---|---|---|
| | | ರಾಜ್ಯ ಸರ್ಕಾರಗಳ ಸಲಹೆಗಳನ್ನು ಪರಾಮರ್ಶಿಸಲು ಕೇಂದ್ರ ಸರ್ಕಾರವು ಶ್ರೀ ಸಂಜಯ್ ಕುಮಾರ್, ಭಾ.ಅ.ಸೇ (ನಿ) ಇವರ ಅಧ್ಯಕ್ಷತೆಯಲ್ಲಿ ಸಮಿತಿಯೊಂದನ್ನು ರಚಿಸಿರುತ್ತದೆ. ಸದರಿ ಸಮಿತಿಯ ಅಧ್ಯಕ್ಷರಿಗೆ ದಿನಾಂಕ: 29.06.2022 ರ ಪತ್ರದಲ್ಲಿ ಹಾಗೂ ಸದರಿ ಸಮಿತಿಯ ಸಂಚಾಲಕರಿಗೆ ದಿನಾಂಕ:30.01.2024 ರ ಪತ್ರದಲ್ಲಿ ಈಗಾಗಲೇ ರಾಜ್ಯ ಸಚಿವ ಸಂಪುಟ ಸಭೆಗಳಲ್ಲಿ ನಿರ್ಣಯಿಸಿರುವಂತೆ ಡಾ॥ ಕಸ್ತೂರಿ ರಂಗನ್ ಸಮಿತಿಯ ವರದಿಯ ಶಿಫಾರಸ್ಸುಗಳನ್ನು ನಿರಾಕರಿಸಿ, ವರದಿ ಸಂಬಂಧ ಹೊರಡಿಸಿದ ಕರಡು ಅಧಿಸೂಚನೆಯನ್ನು ತಿರಸ್ಕರಿಸುವ ರಾಜ್ಯ ಸರ್ಕಾರದ ನಿಲುವನ್ನು ಪುನರುಚ್ಚರಿಸಲಾಗಿದೆ. |
| (ಆ) | ಕಸ್ತೂರಿ ರಂಗನ್ ವರದಿಯನ್ನು ಕರಾವಳಿ, ಮಲೆನಾಡು ಪ್ರದೇಶಗಳಲ್ಲಿ ಜಾರಿಗೊಳಿಸಿದ್ದಲ್ಲಿ ಉಂಟಾದ ಪರಿಣಾಮಗಳ ಬಗ್ಗೆ ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಡಾ॥ ಕಸ್ತೂರಿ ರಂಗನ್ ಸಮಿತಿಯ ವರದಿಯ ಶಿಫಾರಸ್ಸುಗಳ ಅನ್ವಯ ಕೇಂದ್ರ ಸರ್ಕಾರವು ಹೊರಡಿಸಿದ ಕರಡು ಅಧಿಸೂಚನೆಯಲ್ಲಿ ಪ್ರಸ್ತಾಪಿತ ಭೂ ಪ್ರದೇಶದ ಹೆಚ್ಚಿನ ಭಾಗವು ಈಗಾಗಲೇ ವಿವಿಧ ಹಂತದ ರಕ್ಷಣೆಯಲ್ಲಿರುವುದರಿಂದ ಈ ನಿಬಂಧನೆಗಳ ಅನುಷ್ಠಾನವು ವಿಪರೀತವಾಗುವ ಸಾಧ್ಯತೆಯಿರುವುದರಿಂದ ಜನರ ಜೀವನೋಪಾಯಕ್ಕೆ ಪ್ರತಿಕೂಲ ಪರಿಣಾಮ ಉಂಟಾಗಬಹುದೆಂದು ಕರಡು ಅಧಿಸೂಚನೆಯನ್ನು ತಿರಸ್ಕರಿಸುವ ರಾಜ್ಯ ಸರ್ಕಾರದ ನಿಲುವನ್ನು ಕೇಂದ್ರ ಸರ್ಕಾರಕ್ಕೆ ಸ್ಪಷ್ಟವಾಗಿ ತಿಳಿಸಲಾಗಿದೆ. |
| (ಇ) | ಕಸ್ತೂರಿ ರಂಗನ್ ವರದಿಯನ್ನು ಜಾರಿಗೊಳಿಸಿದ್ದಲ್ಲಿ ರಾಜ್ಯದ ಅಭಿವೃದ್ಧಿ ಕುಂಠಿತಗೊಳ್ಳುವುದು ಮತ್ತು ಜನರಿಗೆ /ಕೃಷಿಕರಿಗೆ ಉಂಟಾಗುವ ಪರಿಣಾಮಗಳ ಬಗ್ಗೆ ಸರ್ಕಾರ ಗಮನಿಸಲಾಗಿದೆಯೇ; ಈ ಬಗ್ಗೆ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು) | ಪ್ರಸ್ತುತ ಪಶ್ಚಿಮ ಘಟ್ಟ ಪ್ರದೇಶದಲ್ಲಿ ಈಗಾಗಲೇ ಅನೇಕ ನಿಷೇಧಗಳು / ನಿರ್ಬಂಧಗಳು ಇರುವುದರಿಂದ ಪರಿಸರ ಸೂಕ್ಷ್ಮ ಪ್ರದೇಶ ಅಡಿಯಲ್ಲಿ ಹೆಚ್ಚುವರಿ ಪ್ರದೇಶದ ಘೋಷಣೆಯು ಈ ಪ್ರದೇಶದ ಹೆಚ್ಚಿನ ಸಂಖ್ಯೆಯ ಜನರ ಅಭಿವೃದ್ಧಿ ಮತ್ತು ಜೀವನೋಪಾಯದ ಅವಕಾಶಗಳಿಗೆ ಹಾನಿಕಾರಕವೆಂಬ ರಾಜ್ಯ ಸರ್ಕಾರದ ಸ್ಪಷ್ಟ ನಿಲುವನ್ನು ಕೇಂದ್ರ ಸರ್ಕಾರಕ್ಕೆ ತಿಳಿಸಲಾಗಿದೆ. |
| ಈ) | ಕಸ್ತೂರಿ ರಂಗನ್ ವರದಿಯನ್ನು ಜಾರಿಗೊಳಿಸಿದ್ದಲ್ಲಿ, ಕರ್ನಾಟಕದಲ್ಲಿ ನಿರ್ವಸಿತರಾಗುವ ಜನರ ಸಂಖ್ಯೆ ಎಷ್ಟು; ಅವರಿಗೆ ಪುನರ್ ವಸತಿ ಕಲ್ಪಿಸಲು | ಡಾ. ಕಸ್ತೂರಿ ರಂಗನ್ ವರದಿಯನ್ನು ಅನುಸರಿಸಿದ ಅಧಿಸೂಚನೆಯು ಪರಿಸರ ಸೂಕ್ಷ್ಮ ಪ್ರದೇಶವೆಂದು ಗುರುತಿಸಲ್ಪಟ್ಟಿರುವ ಪ್ರದೇಶದಲ್ಲಿ ವಾಸಿಸುವ ಜನರ ಬದುಕಿನ ಮೇಲೆ ಯಾವುದೇ ರೀತಿಯ ಹೊಸ ನಿರ್ಬಂಧಗಳನ್ನು ವಿಧಿಸುವುದಿಲ್ಲ ಮತ್ತು ಅವರ ದೈನಂದಿನ ಚಟುವಟಿಕೆಗಳು |

| | | |
|---|---|---|
| | ಚಿಂತಿಸಲಾಗಿದೆಯೇ; (ವಿವರ ನೀಡುವುದು) | ಹಾಗೂ ಜೀವನಾಧಾರಗಳ ಮೇಲೆ ಯಾವುದೇ ದುಷ್ಪರಿಣಾಮಗಳನ್ನು ಬೀರುವುದಿಲ್ಲ. ಈ ಹಿನ್ನೆಲೆಯಲ್ಲಿ ಜನರು ನಿರ್ವಸಿತರಾಗುವ ಪರಿಸ್ಥಿತಿಯು ಉದ್ಭವಿಸುವುದಿಲ್ಲ. |
| (ಉ) | ಕರ್ನಾಟಕದ ಕೊಡಗು ದಕ್ಷಿಣ ಕನ್ನಡ ಉತ್ತರ ಕನ್ನಡದಲ್ಲಿರುವ ಕೃಷಿಕರಿಗೆ ಪ್ರವಾಸೋದ್ಯಮಕ್ಕೆ ದೊಡ್ಡಮಟ್ಟದ ತೊಂದರೆ ಉಂಟಾಗಲಿದ್ದು, ಈ ಬಗ್ಗೆ ಇಲಾಖೆ ಅಧ್ಯಯನ ನಡೆಸಿದೆಯೇ? (ವಿವರ ನೀಡುವುದು) | ಡಾ. ಕಸ್ತೂರಿ ರಂಗನ್ ವರದಿಯನ್ನು ಅನುಸರಿಸಿದ ಅಧಿಸೂಚನೆಯಲ್ಲಿ ನಿರ್ಬಂಧಿಸಿರುವ ಕೆಲವು ಚಟುವಟಿಕೆಗಳನ್ನು ಹೊರತುಪಡಿಸಿ, ನೆಡುತೋಪು ನಿರ್ಮಾಣ, ಕೃಷಿ ಚಟುವಟಿಕೆ ಮತ್ತಾವುದೇ ಚಟುವಟಿಕೆಗಳ ಮೇಲೆ ನಿರ್ದಿಷ್ಟ ನಿಷೇಧ ಹೇರುವುದಿಲ್ಲ. ಈ ಪ್ರದೇಶದಲ್ಲಿ ಹಾಲಿ ಚಾಲ್ತಿಯಲ್ಲಿರುವ ಯೋಜನೆಗಳು/ ಚಟುವಟಿಕೆಗಳು ಅಸ್ತಿತ್ವದಲ್ಲಿರುವ ಶಾಸನಾನುಸಾರ ಮುಂದುವರಿಯುತ್ತವೆ. |

ಸಂಖ್ಯೆ.ಅಪಜೀ 160 ಇಎನ್‌ವಿ 2024

Bhandre.

**(ಈಶ್ವರ ಬಿ. ಖಂಡ್ರೆ)**

ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರು